ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ನಂದಿ ಗಿರಿಧಾಮ ವಲಯದಲ್ಲಿ ಗಣಿಗಾರಿಕೆ ನಿಷೇಧ ಕುರಿತು

ಡಾ|| ತೇಜಸ್ವಿನಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

139 (163) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಗ್ರಾಮಾಂತರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ನಂದಿ ಗಿರಿಧಾಮ ವಲಯದಲ್ಲಿ ಗಣಿಗಾರಿಕೆಯಲ್ಲಿ ತೊಡಗಿರುವ ಸಂಸ್ಥೆಗಳು ಯಾವುವು ; (ಮಾಹಿತಿ ನೀಡುವುದು)

(ಆ) ಅವೈಜ್ಞಾನಿಕ ಗಣಿಗಾರಿಕೆಯಿಂದ ಉಂಟಾಗುವ ಪರಿಸರ ಮಾಲಿನ್ಯ ಹಾಗೂ ಶಬ್ದ ಮಾಲಿನ್ಯದಿಂದ ವನ ಸಂಪತ್ತು ಹಾಗೂ ವನ್ಯಜೀವಿ ಸಂಪತ್ತು ನಾಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅತಿಭಾರದ ಲಾರಿಗಳ ಸಂಚಾರದಿಂದ ಹಾಳಾಗುತ್ತಿರುವ ರಸ್ತೆಗಳ ಪುನರ್ ನಿರ್ಮಾಣ, ದುರಸ್ಥಿಕಾರ್ಯಕ್ಕಾಗಿ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು;ಅದಕ್ಕೆ ಮೀಸಲಿಟ್ಟ ಹಣವೆಷ್ಟು ;

(ಈ) ಅತ್ಯಮೂಲ್ಯ ಹಾಗೂ ಅಪರೂಪದ ಪಂಚಗಿರಿ (ನಂದಿಗಿರಿ) ವಲಯದಲ್ಲಿ ಸಂಪೂರ್ಣವಾಗಿ ಗಣಿಗಾರಿಕೆ ನಿಷೇಧಿಸುವ ಯೋಜನೆಯನ್ನು ಸರ್ಕಾರವು ಹೊಂದಿದೆಯೇ ?